# All India Radio: Bangalore
# Regional Bulletin In Kannada
# 12.07.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 12.07.2026 / 2.30 p.m.

**<><><><>**

ಮುಖ್ಯಾಂಶಗಳು

1. ಗಾನಕೋಗಿಲೆ ಎಸ್.ಜಾನಕಿ ನಿಧನ: ಮೈಸೂರಿನಲ್ಲಿ ಇಂದು ಸಂಜೆ ಧಾರ್ಮಿಕ ವಿಧಿವಧಾನದೊಂದಿಗೆ ಅಂತ್ಯಸಂಸ್ಕಾರ
2. ಪ್ರಸಿದ್ಧ ಹಿನ್ನೆಲೆ ಗಾಯಕಿ ಎಸ್. ಜಾನಕಿ ನಿಧನಕ್ಕೆ ಗಣ್ಯರಿಂದ ಸಂತಾಪ
3. ರಾಜ್ಯದ ಹಲವು ಜಿಲ್ಲೆಗಳಲ್ಲಿ 'ರಾಷ್ಟ್ರೀಯ ಲೋಕ್' ಅದಾಲತ್ ಯಶಸ್ವಿ
4. ಶಾಶ್ವತ ನಿವಾಸ ಪ್ರಮಾಣಪತ್ರ ನೀಡುವ ರಾಜ್ಯ ಸರ್ಕಾರ ಆದೇಶ ರದ್ದಿಗೆ ಆಗ್ರಹ

<><><><>

ಪ್ರಸಿದ್ಧ ಹಿನ್ನೆಲೆ ಗಾಯಕಿ ಎಸ್. ಜಾನಕಿ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಅನೇಕ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ. ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಅನೇಕ ಗಣ್ಯರು ಜಾನಕಿ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು, ಸಾಂಸ್ಕೃತಿಕ ನಗರಿ ಹಾಗೂ ಸಂಗೀತದ ಪರಂಪರೆಯ ತಾಣವಾದ ಮೈಸೂರಿನಲ್ಲೇ ಜಾನಕಮ್ಮನವರ ಅಂತ್ಯಕ್ರಿಯೆ ನೆರವೇರುತ್ತಿರುವುದು ನಮ್ಮ ಭಾಗ್ಯ ಎಂದು ಗಣ್ಯರು ಸ್ಮರಿಸಿದ್ದಾರೆ. ಭಾರತದ ಅಪ್ರತಿಮ ಗಾಯಕಿ, ಗಾನ ಕೋಗಿಲೆ ಎಂದೆ ಹೆಸರು ಪಡೆದಿರುವ ಎಸ್. ಜಾನಕಿ ಅವರು, ೫೦ ವರ್ಷಗಳ ಕಾಲ ಸುದೀರ್ಘ ಸೇವೆಯನ್ನು ಸಲ್ಲಿಸಿ ೧೭ಕ್ಕೂ ಹೆಚ್ಚು ಭಾಷೆಗಳಲ್ಲಿ ಸುಮಾರು ೪೮ ಸಾವಿರಕ್ಕೂ ಅಧಿಕ ಹಾಡುಗಳಿಗೆ ಧ್ವನಿಯನ್ನು ನೀಡಿದ ಏಕೈಕ ಗಾಯಕಿ ಮತ್ತು ಹಲವಾರು ಪ್ರಶಸ್ಥಿ ಪಡೆದ ಗಾಯಕಿ ಎಂದು ಸ್ಮರಿಸಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಂತಾಪ ಸೂಚಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ - ಡಿ.ಕೆ. ಶಿವಕುಮಾರ್**

<><><><>

ಪ್ರಖ್ಯಾತ ಹಿನ್ನೆಲೆ ಗಾಯಕಿ, ಗಾನಕೋಗಿಲೆ ಎಸ್.ಜಾನಕಿ ನಿಧನ ಹಿನ್ನೆಲೆ ಅವರ ಅಂತ್ಯಸಂಸ್ಕಾರವು ಇಂದು ಸಂಜೆ ಧಾರ್ಮಿಕ ವಿಧಿವಿಧಾನಗಳೊಂದಿಗೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಬ್ರಾಹ್ಮಣ ಸಂಪ್ರದಾಯದ ಪ್ರಕಾರ ಅಂತಿಮ ಸಂಸ್ಕಾರದ ಕಾರ್ಯಗಳು ಜರುಗಲಿದ್ದು, ಪ್ರಸ್ತುತ ಮೈಸೂರು ಮಹಾರಾಜ ಕಾಲೇಜು ಮೈದಾನದಲ್ಲಿ, ಪಾರ್ಥಿವ ಶರೀರದ ಸಾರ್ವಜನಿಕ ದರ್ಶನಕ್ಕಾಗಿ ವ್ಯವಸ್ಥೆ ಮಾಡಲಾಗಿದೆ. ಅಭಿಮಾನಿಗಳು, ಗಣ್ಯರು ಅಂತಿಮ ದರ್ಶನ ಪಡೆದು, ಗೌರವ ನಮನಗಳನ್ನು ಸಲ್ಲಿಸುತ್ತಿದ್ದಾರೆ. ಇಂದು ಸಂಜೆ ೫ ಗಂಟೆ ೪೫ ನಿಮಿಷದ ಒಳಗೆ ಎಲ್ಲಾ ಅಂತಿಮ ವಿಧಿವಿಧಾನಗಳನ್ನು ಪೂರ್ಣಗೊಳಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಕುಟುಂಬಸ್ಥರು ಮಾಹಿತಿ ನೀಡಿದ್ದಾರೆ. ಅಂತ್ಯಕ್ರಿಯೆಯು ಮೈಸೂರಿನ ಬೋಗಾದಿ ಸಮೀಪದ ಕಣಿಯನಹುಂಡಿಯ ತೋಟದ ಮನೆಯಲ್ಲಿ ಜರುಗಲಿದೆ.

<><><><>

ಅಂತಿಮ ದರ್ಶನದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷೆ ಜಯಮಾಲ ಅವರು, ೧೯೭೫ರ 'ಪ್ರೇಮದ ಕಾಣಿಕೆ' ಚಿತ್ರದ ದಿನಗಳಿಂದಲೂ ತಮಗೆ ಜಾನಕಮ್ಮನವರ ಒಡನಾಟ ಇತ್ತೆಂದು ನೆನೆದರು.

**ಧ್ವನಿ - ಜಯಮಾಲ, ನಟಿ**

ಇದೇ ಸಂದರ್ಭದಲ್ಲಿ ಮಾತನಾಡಿದ ಸಂಗೀತ ನಿರ್ದೇಶಕ ಹಂಸಲೇಖ ಅವರು, ಆರು ದಶಕಗಳ ಕಾಲ ಸಂಗೀತ ಲೋಕಕ್ಕೆ ಅನನ್ಯ ಸೇವೆ ಸಲ್ಲಿಸಿದ ಜಾನಕಮ್ಮನವರದು ಪರಿಪೂರ್ಣ ಜೀವನವಾಗಿತ್ತು ಎಂದರು. ಜಾನಕಮ್ಮನವರ ಪ್ರಿಯ ಶಿಷ್ಯರು ಒಪ್ಪಿಗೆ ನೀಡಿದರೆ, ಅವರ ಹೆಸರಿನಲ್ಲಿ ಮೈಸೂರಿನಲ್ಲಿ ಭವ್ಯ 'ಸಂಗೀತ ಮೆಮೋರಿಯಲ್' ನಿರ್ಮಾಣ ಮಾಡಲು ಸಂಗೀತಗಾರರ ಸಂಘ ನಿರ್ಧರಿಸಿದೆ, ಈ ಮಹತ್ಕಾರ್ಯಕ್ಕೆ ಸರ್ಕಾರ ಕೈಜೋಡಿಸಬೇಕು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಹಂಸಲೇಖ ಅವರು ವಿಶೇಷ ಮನವಿ ಸಲ್ಲಿಸಿದ್ದಾರೆ.

**ಧ್ವನಿ - ಹಂಸಲೇಖ, ಹಿನ್ನಲೆ ಗಾಯಕ**

ಸಂಗೀತ ಲೋಕದ ಧ್ರುವತಾರೆ, ದಂತಕತೆ, ಗಾನಕೋಗಿಲೇ, ಎಸ್. ಜಾನಕಿ ಅವರು ವಿಧಿವಶರಾಗಿರುವುದು ತುಂಬಲಾಗದ ನಷ್ಟವನ್ನು ತಂದಿದ್ದು, ಅವರ ಆತ್ಮಕ್ಕೆ ಶಾಂತಿ ಕೋರುತ್ತೇನೆ ಎಂದು ಡಾ. ಸಿ.ಎನ್. ಮಂಜುನಾಥ್ ಹೇಳಿದ್ದಾರೆ.

**ಧ್ವನಿ - ಡಾ. ಸಿ.ಎನ್ ಮಂಜುನಾಥ್**

ಸಂಗೀತ ಲೋಕದ ದಂತಕತೆ ಗಾನ ಕೋಗಿಲೆ ಎಸ್. ಜಾನಕಿ ಅವರ ನಿಧನಕ್ಕೆ ವಿಜಯಪ್ರಕಾಶ್ ಸಂತಾಪ ಸೂಚಿಸಿದ್ದಾರೆ.

**ಧ್ವನಿ: ವಿಜಯಪ್ರಕಾಶ್**

<><><><>

ಕೋಲಾರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯಾದ್ಯಂತ ಬಾಕಿ ಇದ್ದ ಸಿವಿಲ್, ಕ್ರಿಮಿನಲ್ ಹಾಗೂ ವಿಮಾ ಪರಿಹಾರ ಪ್ರಕರಣಗಳು ಸೇರಿದಂತೆ ಒಟ್ಟು ೮೦ ಸಾವಿರದ ೯೮೭ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಂಡಿದ್ದಾರೆ ಎಂದು  ಕೋಲಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಭು ಎನ್. ಬಡಿಗೇರ್ ತಿಳಿಸಿದ್ದಾರೆ. ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿದ್ದ ೪ ಸಾವರದ ೬೦೮ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ೭೫ ಸಾವಿರದ ೭೭೯ ಪ್ರಕರಣಗಳು ಸೇರಿವೆ. ಇತ್ಯರ್ಥಗೊಂಡ ಈ ಪ್ರಕರಣಗಳ ಒಟ್ಟು ಪರಿಹಾರ ಮೊತ್ತ  ೪೧ ಕೋಟಿ ೭೪ ಲಕ್ಷದ ೪೯ ಸಾವಿರದ ೪೦೫ ರೂಪಾಯಿಗಳಾಗಿದೆ ಎಂದು ತಿಳಿಸಿದ್ದಾರೆ. ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಮರುಳಸಿದ್ದಾರಾಧ್ಯ ಎಚ್.ಜೆ. ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಅವರ ನೇತೃತ್ವದಲ್ಲಿ ಲೋಕ್ ಅದಾಲತ್ ನಡೆಯಿತು. ಕಕ್ಷಿದಾರರು, ವಕೀಲರು ಹಾಗೂ ಸಂಧಾನಕಾರರ ಸಮ್ಮುಖದಲ್ಲಿ ಪ್ರಕರಣಗಳನ್ನು ಪರಸ್ಪರ ಒಪ್ಪಂದದ ಮೂಲಕ ಬಗೆಹರಿಸಲಾಯಿತು. ಪ್ರಸಕ್ತ ವರ್ಷದ ಎರಡನೇ ರಾಷ್ಟ್ರೀಯ ಮೆಗಾ ಲೋಕ್ ಅದಾಲತ್‌ನ್ನು ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಶನಿವಾರ ಯಶಸ್ವಿಯಾಗಿ ನಡೆಸಲಾಗಿದ್ದು, ರಾಜಿ ಸಂಧಾನದ ಮೂಲಕ ಒಟ್ಟು ೭ ಸಾವಿರದ ೨೩೭ ಪ್ರಕರಣಗಳು ಇತ್ಯರ್ಥಗೊಂಡಿವೆ. ದಾವಣಗೆರೆ ಜಿಲ್ಲೆಯ ನ್ಯಾಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ೫ ಸಾವಿರದ ೭೯೨

ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಲಾಗಿದ್ದು, ಒಟ್ಟು ೧೩ ಕೋಟಿ ರೂಪಾಯಿಗೂ ಅಧಿಕ ಪರಿಹಾರ ಮೊತ್ತ ಪಾವತಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ. ತಿಳಿಸಿದ್ದಾರೆ. ನ್ಯಾಯಾಧೀಶರು ಹಾಗೂ ಅಧಿಕಾರಿಗಳ ಸಕಾರಾತ್ಮಕ ಶ್ರಮದಿಂದಾಗಿ ಕೇವಲ ಒಂದು ತಿಂಗಳು ಹತ್ತು ದಿನಗಳ ಅವಧಿಯಲ್ಲಿ ಈ ಯಶಸ್ಸು ಸಾಧ್ಯವಾಗಿದೆ ಎಂದಿದ್ದಾರೆ.

<><><><>

ಶಾಶ್ವತ ನಿವಾಸ ಪ್ರಮಾಣಪತ್ರ ನೀಡುವ ಮೂಲಕ ರಾಜ್ಯ ಸರ್ಕಾರ ಅಕ್ರಮ ವಲಸಿಗರನ್ನು ಮನೆ ಮಕ್ಕಳನ್ನಾಗಿ ಮಾಡಲು ಮುಂದಾಗಿದೆ. ಇದರಿಂದ ದೇಶದ ಭದ್ರತೆಗೆ ಧಕ್ಕೆ ಬಂದಿದ್ದು, ಕೂಡಲೇ ಈ ಆದೇಶ ರದ್ದು ಮಾಡಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ. ಮಂಡ್ಯ ನಗರದ ವಿಕಾಸ ಭವನದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಪೌರತ್ವದ ಅಧಿಕಾರವನ್ನೇ ಹೈಜಾಕ್ ಮಾಡಲು ಮುಂದಾಗಿದೆ. ಇದನ್ನು ನೀಡುವ ಅಧಿಕಾರ ಕೇಂದ್ರ ಸರ್ಕಾರಕ್ಕೆ ಮಾತ್ರವಿದ್ದು, ಅದರದ್ದೇ ಆದ ನಿಯಮಗಳಿವೆ. ಆದರೆ ರಾಜ್ಯ ಸರ್ಕಾರ ಜೂನ್ ೨೯ ರಂದು ಶಾಶ್ವತ ನಿವಾಸ ಪ್ರಮಾಣಪತ್ರಕ್ಕೆ ಸಂಬಂಧಿಸಿದಂತೆ ಆದೇಶ ಹೊರಡಿಸಿದೆ. ಕೂಡಲೇ ಈ ಆದೇಶ ವಾಪಸ್ ಪಡೆಯಬೇಕು. ಇಲ್ಲವಾದರೆ ರಾಜ್ಯಪಾಲರನ್ನು ಭೇಟಿ ಮಾಡಿ ರದ್ದು ಮಾಡಲು ದೂರು ಸಲ್ಲಿಸಲಾಗುವುದು ಎಂದರು. ಅಕ್ರಮ ವಲಸಿಗರನ್ನು ಮನೆ ಮಕ್ಕಳನ್ನಾಗಿ ಮಾಡುವ ಹುನ್ನಾರ ಕಾಂಗ್ರೆಸ್‌ನಿಂದ ನಡೆದಿದೆ. ಬಾಂಬ್ ಸ್ಫೋಟ, ಆಂತರಿಕ ಗಲಭೆ ಉಂಟಾದರೆ ಅದಕ್ಕೆ ಸರ್ಕಾರವೇ ನೇರ ಹೊಣೆಯಾಗುತ್ತದೆ. ಇದು ಸಂವಿಧಾನಬದ್ಧವೇ ಹಾಗೂ ಪೌರತ್ವ ಪರಿಶೀಲನೆ ಯಾರು ಅಧಿಕಾರ ಕೊಟ್ಟರು ಎಂದು ಸರ್ಕಾರ ಸ್ಪಷ್ಟೀಕರಣ ನೀಡಲಿ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>